ಕೆಯುಡಬ್ಲ್ಯೂಎಸ್ ಅಂಡ್ ಡಿ.ಬಿ ವತಿಯಿಂದ ಗುಂಡ್ಲುಪೇಟೆ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆ

2095 (2214) - ಶ್ರೀ ವ್ಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆಯುಡಬ್ಲ್ಯೂಎಸ್ ಅಂಡ್ ಡಿ ಬಿ ವತಿಯಿಂದ ಗುಂಡ್ಲುಪೇಟೆ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಯ ಮಾರ್ಗ ಮಧ್ಯದಲ್ಲಿ ಬರುವ ಗ್ರಾಮಗಳಿಗೆ ನೀರು ಒದಗಿಸಲು ಯೋಜಿಸಲಾಗಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಇ) ಪಟ್ಟಣಕ್ಕೆ ನೀರು ಒದಗಿಸುವಾಗಲೇ ಈ ಗ್ರಾಮಗಳಿಗೆ ನೀರು ಒದಗಿಸಲಾಗುತ್ತದೆಯೇ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಯೋಜಿಸಲಾಗಿದೆ.

ಆ) ಗುಂಡ್ಲುಪೇಟೆ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಯ ಮಾರ್ಗ ಮಧ್ಯದಲ್ಲಿ ಬರುವ ಗ್ರಾಮಗಳಿಗೆ ನೀರು ಒದಗಿಸಲು ಕೊಳವೆ ಮಾರ್ಗದಲ್ಲಿ 'ಟಿ' ಗಳನ್ನು ಅಳವಡಿಸಲಾಗಿದೆ.

ಇ) ಮಾರ್ಗ ಮಧ್ಯದಲ್ಲಿ ಬರುವ ಹಳ್ಳಿಗಳಿಗೆ ನೀರು ಒದಗಿಸುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯೊಂದಿಗೆ ವ್ಯವಹರಿಸಲಾಗುತ್ತಿದ್ದು, ಅವರ ಪ್ರತಿ ಕ್ರಿಯೆಯನ್ನು ಅನುಸರಿಸಿ ಕ್ರಮ ಜರುಗಿಸಲಾಗುವುದು.

ಗುಂಡ್ಲುಪೇಟೆ ತಾಲ್ಲೂಕು ಗೋಪಾಲಪುರ ಗ್ರಾಮದಲ್ಲಿ ಕೆರೆ ನಿರ್ಮಾಣ

2097 (2218) - ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ): ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಂಡ್ಲುಪೇಟೆ ತಾಲ್ಲೂಕು ಗೋಪಾಲಪುರ ಗ್ರಾಮದ ಬಳಿ ಕೆರೆ ನಿರ್ಮಿಸಲಾಗುತ್ತಿದೆಯೇ;

ಆ) ಹಾಗಿದ್ದಲ್ಲಿ ಯಾವಾಗ ಕೆಲಸ ಪ್ರಾರಂಭಿಸಲಾಗಿದೆ;

ಇ) ಕಾಮಗಾರಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು):

ಅ) ಹೌದು.

ಆ) ಈ ಯೋಜನೆಯ ಕೆಲಸವನ್ನು ದಿನಾಂಕ: 1-7-99 ರಂದು ಪ್ರಾರಂಭಿಸಲಾಗಿದೆ.

ಇ) ಹೌದು.

ಈ) ಸದರಿ ಯೋಜನೆಯ ಉಳಿಕೆ ಕೆಲಸಗಳಿಗೆ ಟೆಂಡರ್ ಪರಿಶೀಲನೆಯಲ್ಲಿದ್ದು, ಅನುದಾನದ ಕೊರತೆಯಿಂದಾಗಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿಲ್ಲ. ಅನುದಾನದ ಲಭ್ಯತೆಯ ಮೇರೆಗೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

ಸರ್ಕಾರಿ ಕೆಲಸದಲ್ಲಿರುವ ದಂಪತಿಗಳ ವರ್ಗಾವಣೆ ಕುರಿತು

2098 (2509) - ಶ್ರೀ ಮೋಹನ್ ಕೆ ಶೆಟ್ಟಿ (ಕುಮಟ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪತಿ: ಪತ್ನಿ ಇಬ್ಬರೂ ಸರ್ಕಾರಿ ನೌಕರರಾಗಿದಲ್ಲಿ ಮಾತ್ರ ವರ್ಗಾವಣೆಗೆ ಪರಿಗಣಿಸುತ್ತಿರುವುದರಿಂದ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ದಂಪತಿಯಲ್ಲೊಬ್ಬರು ಖಾಸಗಿ ಉದ್ಯೋಗದಲ್ಲಿ ಇರುವ ಪ್ರಕರಣಗಳಲ್ಲಿ ತೊಂದರೆಗೆ ಈಗಾದವರಿಗೆ ಅನುಕೂಲವಾಗುವಂತೆ ನಿಯಮಾವಳಿಯನ್ನು ತಿದ್ದುಪಡಿ ಮಾಡಲಾಗುವುದೇ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಹೌದು.

ಆ) ಪರಿಶೀಲಿಸಲಾಗುತ್ತಿದೆ.

ಪೀಣ್ಯ ಎರಡನೇ ಹಂತಕ್ಕೆ ಹೋಗುವ ರಸ್ತೆ ದುರಸ್ಥಿ

2099 (2502) - ಶ್ರೀ ಜಿ.ಎಸ್. ನಂಜುಂಡಸ್ವಾಮಿ (ಕೊಳ್ಳೇಗಾಲ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಕಂಠೀರವ ಸ್ಟುಡಿಯೋ ಹತ್ತಿರದ ರಿಂಗ್ ರೋಡ್‌ನಿಂದ ಪೀಣ್ಯ ಎರಡನೇ ಹಂತಕ್ಕೆ ಹೋಗುವ ರಸ್ತೆಯು ತುಂಬಾ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ರಸ್ತೆ ದುರಸ್ತಿಪಡಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಹೌದು.

ಆ) ಈ ರಸ್ತೆಯು 2.50 ಕಿ.ಮೀ ಇದ್ದು, ಇದರ ದುರಸ್ತಿಗಾಗಿ 33.00 ಲಕ್ಷ ರೂ.ಗಳ ಅಂದಾಜಿನಲ್ಲಿ ಗುತ್ತಿಗೆ ಸ್ವೀಕರಿಸಿದ್ದು, ಇಷ್ಟರಲ್ಲೇ ಕೈಗೊಳ್ಳಲಾಗುವುದು.

ಕೊಳ್ಳೇಗಾಲ ಬೆಂಗಳೂರು ನಡುವೆ ಬಸ್ ವ್ಯವಸ್ಥೆ

2100 (2503) - ಶ್ರೀ ನಂಜುಂಡಸ್ವಾಮಿ ಜಿ.ಎಸ್. (ಕೊಳ್ಳೇಗಾಲ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೇಗಾಲದಲ್ಲಿ ಬಸ್ ಡಿಪೋ ನಿರ್ಮಿಸಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಗ್ರಾಮಾಂತರ ಪ್ರದೇಶಗಳ ಜನರ ಅನುಕೂಲಕ್ಕೆ ವಾಹನ ಸೌಲಭ್ಯ ಒದಗಿಸಲು ಸರಕಾರ ಕೈಗೊಂಡಿರುವ ಕ್ರಮ ಏನು;

ಇ) ಕೊಳ್ಳೇಗಾಲ ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಕೊಳ್ಳೇಗಾಲ-ಬೆಂಗಳೂರು ಮಧ್ಯೆ ಸುವಿಹಾರಿ ಬಸ್ ಒದಗಿಸಲು ಸರಕಾರ ಕೈಗೊಂಡಿರುವ ಕ್ರಮ ಏನು?

ಶ್ರೀ ಬಿ. ರಮಾನಾಥ ರೈ (ಮಾನ್ಯ ಸಾರಿಗೆ ಸಚಿವರು):

ಅ) "ಹೌದು"

ಆ) ಕೊಳ್ಳೇಗಾಲ ಕ್ಷೇತ್ರವು ಭಾಗಶಃ ರಾಷ್ಟ್ರೀಕೃತವಲ್ಲದ ವಲಯದಲ್ಲಿರುತ್ತದೆ. ಕೊಳ್ಳೇಗಾಲ-ಬೆಂಗಳೂರು ಮತ್ತು ಚಾಮರಾಜನಗರ ರಾಷ್ಟ್ರೀಕೃತ ವಲಯದಲ್ಲಿದ್ದು ಈ ಮಾರ್ಗಗಳಲ್ಲಿ